ಕರ್ನಾಟಕ ಸರ್ಕಾರ

**ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು**

*ಸಂಖ್ಯೆ : ಸಿ5(2)ಬಡ್ತಿ-01/2014-15* ದಿನಾಂಕ : 04/07/2015

***ಅಧಿಸೂಚನೆ***

ವಿಷಯ :- ಸಾರ್ವಜನಿಕ ಶಿಕ್ಷಣ ಇಲಾಖೆಯ ಅಧೀಕ್ಷಕರುಗಳಿಗೆ ಸಹಾಯಕ ನಿರ್ದೇಶಕರು (ಬೋಧಕೇತರ) / ಪತ್ರಾಂಕಿತ ವ್ಯವಸ್ಥಾಪಕರ ಹುದ್ದೆಗೆ ಪದೋನ್ನತಿ ನೀಡುವ ಕುರಿತು.

ಉಲ್ಲೇಖ :- ಸರ್ಕಾರದ ಆದೇಶ ಸಂಖ್ಯೆ : ಡಿಪಿಎಆರ್ 12 ಎಸ್‌ಡಿಇ 2005 ದ: 29-01-2008.

2 :- ಸರ್ಕಾರದ ಆದೇಶ ಸಂಖ್ಯೆ : ಇಡಿ 464 ಡಿಪಿಐ 2008 ದಿ : 06-01-2009.

3 :- ದಿನಾಂಕ : 02/02/2015 ರಂದು ನಡೆದ ಇಲಾಖಾ ಮುಂಬಡ್ತಿ ಸಮಿತಿಯ ಸಭಾ ನಡವಳಿಗಳು.

4:- ಈ ಕಛೇರಿಯ ಸಮ ಸಂಖ್ಯೆ ಅಧಿಸೂಚನೆ ದಿನಾಂಕ : 09/02/2015.

5:- ದಿನಾಂಕ: 04/07/2015 ರಂದು ನಡೆದ ಸ್ಥಳ ಆಯ್ಕೆ ಪ್ರಕ್ರಿಯೆಯಲ್ಲಿ ಅರ್ಹ ಅಧೀಕ್ಷಕರು ಭಾಗವಹಿಸಿ, ಸ್ಥಳ ಆಯ್ಕೆ ಮಾಡಿಕೊಂಡಿರುವಂತೆ.

* * * * * *

ಪ್ರಸ್ತಾವನೆ :

ಸಾರ್ವಜನಿಕ ಶಿಕ್ಷಣ ಇಲಾಖೆಯ ಬೆಂಗಳೂರು ಆಯುಕ್ತಾಲಯದ ಆಡಳಿತ ವ್ಯಾಪ್ತಿಯಲ್ಲಿ ಬರುವ ಗ್ರೂಪ್ 'ಬಿ' ವೃಂದದ ಪತ್ರಾಂಕಿತ ವ್ಯವಸ್ಥಾಪಕರ / ಸಹಾಯಕ ನಿರ್ದೇಶಕರು(ಭೋದಕೇತರ) ವೃಂದಕ್ಕೆ ಉಲ್ಲೇಖಿತ (1) ರ ಸರ್ಕಾರದ ಆದೇಶದಲ್ಲಿ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ರವರನ್ನು ನೇಮಕಾತಿ ಪ್ರಾಧಿಕಾರಿಯನ್ನಾಗಿ ನೇಮಿಸಿ ಆದೇಶಿಸಲಾಗಿದೆ.

ಗ್ರೂಪ್ 'ಬಿ' ವೃಂದದ ಹುದ್ದೆಗಳಿಗೆ ಬಡ್ತಿಯನ್ನು ನೀಡುವ ಸಲುವಾಗಿ ಆಯುಕ್ತಾಲಯವಾರು ಇಲಾಖಾ ಮುಂಬಡ್ತಿ ಸಮಿತಿಯನ್ನು ಉಲ್ಲೇಖಿತ (2) ರ ಸರ್ಕಾರದ ಆದೇಶದಲ್ಲಿ ರಚಿಸಿ ಆದೇಶಿಸಲಾಗಿದೆ. ಅದರಂತೆ ಬೆಂಗಳೂರು ಆಯುಕ್ತಾಲಯದ ಆಡಳಿತ ವ್ಯಾಪ್ತಿಯಲ್ಲಿ ಬರುವ ಪತ್ರಾಂಕಿತ ವ್ಯವಸ್ಥಾಪಕರ / ಸಹಾಯಕ ನಿರ್ದೇಶಕರು(ಭೋದಕೇತರ) ಹುದ್ದೆಗಳಲ್ಲಿ ಪ್ರಸ್ತುತ ಖಾಲಿ ಇರುವ ಹುದ್ದೆಗಳಿಗೆ ಅಧೀಕ್ಷಕರ ಹುದ್ದೆಯಿಂದ ವೃಂದ ಮತ್ತು ನೇಮಕಾತಿ ನಿಯಮಾವಳಿಗಳಂತೆ ಸ್ಥಾನಪನ್ನ ಬಡ್ತಿಯನ್ನು ನೀಡುವ ಸಲುವಾಗಿ ದಿನಾಂಕ : 02/02/2015 ರಂದು ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರ ಅಧ್ಯಕ್ಷತೆಯಲ್ಲಿ ಇಲಾಖಾ ಮುಂಬಡ್ತಿಯ ಸಭೆಯನ್ನು ನಡೆಸಿ ಅರ್ಹರಿರುವ ಅಧೀಕ್ಷಕರುಗಳಿಗೆ ಗ್ರೂಪ್ 'ಸಿ' ವೃಂದದ ವೇತನ ಶ್ರೇಣಿ ರೂ. 20000-36300 ರಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಈ ಕೆಳಕಂಡ ಅಧೀಕ್ಷಕರುಗಳಿಗೆ ಗ್ರೂಪ್ 'ಬಿ' ವೃಂದದ ವೇತನ ಶ್ರೇಣಿ ರೂ. 21600-40050 ರ ಪತ್ರಾಂಕಿತ ವ್ಯವಸ್ಥಾಕರು / ಸಹಾಯಕ ನಿರ್ದೇಶಕರು(ಬೋಧಕೇತರ) ಹುದ್ದೆಗೆ ಉಲ್ಲೇಖಿತ (4) ರ ಈ ಕಛೇರಿಯ ದಿನಾಂಕ : 06/02/2015 ರಲ್ಲಿ ಸ್ಥಾನಪನ್ನ ಬಡ್ತಿಯನ್ನು ನೀಡಿ ಆದೇಶಿಸಲಾಗಿದೆ.

ಸ್ಥಾನಪನ್ನ ಬಡ್ತಿಯನ್ನು ನೀಡಿರುವ ಅಧೀಕ್ಷಕರುಗಳಿಗೆ ಅವರೇ ಸ್ವತ: ಸ್ಥಳಗಳನ್ನು ಆಯ್ಕೆ ಮಾಡಿಕೊಳ್ಳುವ ಸಲುವಾಗಿ ದಿನಾಂಕ : 04/07/2015 ರಂದು ಸ್ಥಳ ಆಯ್ಕೆ ಪ್ರಕ್ರಿಯೆಯನ್ನು ನಡೆಸಲಾಗಿ



Scanned by CamScanner

ಅರ್ಹ ಅಧೀಕ್ಷಕರುಗಳು ಸ್ಥಳಗಳನ್ನು ಆಯ್ಕೆ ಮಾಡಿಕೊಂಡಿದ್ದು, ಅವರುಗಳಿಗೆ ಸ್ಥಾನಪನ್ನ ಬಡ್ತಿಯನ್ನು ನೀಡಿ ಸ್ಥಳನಿಯುಕ್ತಿಗೊಳಿಸುವ ಸಲುವಾಗಿ ಈ ಕೆಳಕಂಡ ಆದೇಶ.

**ಆದೇಶ :-**

ಸಾರ್ವಜನಿಕ ಶಿಕ್ಷಣ ಇಲಾಖೆಯ ಗ್ರೂಪ್ 'ಸಿ' ವೃಂದದ ವೇತನ ಶ್ರೇಣಿ ರೂ. 20000-36300 ರಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಈ ಕೆಳಕಂಡ ಅಧೀಕ್ಷಕರುಗಳಿಗೆ ಗ್ರೂಪ್ 'ಬಿ' ವೃಂದದ ವೇತನ ಶ್ರೇಣಿ ರೂ. 21600-40050 ರ ಪತ್ರಾಂಕಿತ ವ್ಯವಸ್ಥಾಕರು / ಸಹಾಯಕ ನಿರ್ದೇಶಕರು(ಬೋಧಕೇತರ) ಹುದ್ದೆಗಳಿಗೆ ಸ್ಥಾನಪನ್ನ ಬಡ್ತಿಯನ್ನು ನೀಡಿ ಅವರುಗಳ ಹೆಸರಿನ ಮುಂದೆ ಸೂಚಿಸಲಾಗಿರುವ ಹುದ್ದೆ ಮತ್ತು ಸ್ಥಳಗಳಿಗೆ ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶವಾಗುವವರೆಗೆ ಸ್ಥಳ ನಿಯುಕ್ತಿಗೊಳಿಸಿ ಆದೇಶಿಸಲಾಗಿದೆ.

| ಕ್ರಮ ಸಂಖ್ಯೆ | ಜೇಷ್ಠತಾ ಸಂಖ್ಯೆ | ಅಧೀಕ್ಷಕರ ಹೆಸರು ಮತ್ತು ಪ್ರಸ್ತುತ ಕರ್ತವ್ಯ ನಿರ್ವಹಿಸುತ್ತಿರುವ ಕಛೇರಿಯ ಹೆಸರು ಮತ್ತು ವಿಳಾಸ ಶ್ರೀಮತಿ / ಶ್ರೀ | ಪತ್ರಾಂಕಿತ ವ್ಯವಸ್ಥಾಪಕರು / ಸಹಾಯಕ ನಿರ್ದೇಶಕರು ಹುದ್ದೆಗೆ ಸ್ಥಾನಪನ್ನ ಬಡ್ತಿಯನ್ನು ನೀಡಿ ಸ್ಥಳ ನಿಯುಕ್ತಿಗೊಳಿಸಿರುವ ಹುದ್ದೆ ಮತ್ತು ಕಛೇರಿಯ ವಿಳಾಸ |
|---|---|---|---|
| 1 | 55 | ಎಂ.ಎಸ್. ನಾಗರತ್ನ, ಅಧೀಕ್ಷಕರು, ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ, ಬೆಂಗಳೂರು ಗ್ರಾಮಾಂತರ, ಬೆಂಗಳೂರು | ಉಪ ನಿರ್ದೇಶಕರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ರಾಮನಗರ ಜಿಲ್ಲೆ, ರಾಮನಗರ. (ಶ್ರೀ ರವಿಕುಮಾರ್ ಇವರ ಸ್ವಇಚ್ಚಾ ನಿವೃತ್ತಿಯಿಂದ ತೆರವಾದ ಹುದ್ದೆ) |
| 2 | 86 | ಜಿ.ಆರ್. ತೀರ್ಥಗಿರೀಶ್, ಅಧೀಕ್ಷಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ಬಂಗಾರಪೇಟೆ, ಕೋಲಾರ ಜಿಲ್ಲೆ | ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ಮಾಲೂರು ತಾಲ್ಲೂಕು, ಕೋಲಾರ ಜಿಲ್ಲೆ (ಶ್ರೀ ವಿನಯ್‌ಕುಮಾರ ಇವರ ವರ್ಗಾವಣೆಯಿಂದ ತೆರವಾದ ಹುದ್ದೆ) |
| 3 | 87 | ಎಲ್. ವಾಸುಕೀಶ್, ಅಧೀಕ್ಷಕರು, ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ, ಮೈಸೂರು | ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ಮೈಸೂರು ಉತ್ತರ ವಲಯ, ಮೈಸೂರು (ಶ್ರೀ ಎಸ್. ಆರೀಫ್ ಉಲ್ಲಾ ಖಾನ್ ಇವರ ವರ್ಗಾವಣೆಯಿಂದ ತೆರವಾದ ಹುದ್ದೆ) |
| 4 | 88 | ಅನಂತಪದ್ಮನಾಭರಾವ್, ಅಧೀಕ್ಷಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ತಾಲ್ಲೂಕು ವಲಯ, ಮೈಸೂರು | ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ಹುಣಸೂರು ತಾಲ್ಲೂಕು, ಮೈಸೂರು ಜಿಲ್ಲೆ (ಶ್ರೀ ಟಿ. ಹನುಮಂತಪ್ಪ ಇವರು ನಿವೃತಿಹೊಂದಿರುವುದರಿಂದ ತೆರವಾದ ಹುದ್ದೆ) |
| 5 | 90 | ಆರ್. ವರದಾಂಬ, ಅಧೀಕ್ಷಕರು, ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, ಬೆಂಗಳೂರು | ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ದೇವನಹಳ್ಳಿ ತಾ; ಬೆಂಗಳೂರು ಗ್ರಾಮಾಂತರ . (ಶ್ರೀ ಕೆ.ಎನ್. ನಾಗರಾಜು ಇವರ ವರ್ಗಾವಣೆಯಿಂದ ತೆರವಾದ ಹುದ್ದೆ) |



Scanned by CamScanner

| | | | |
|---|---|---|---|
| 6 | 91 | ಜಿ.ಎನ್. ವೆಂಕಟಕೃಷ್ಣಯ್ಯ ಶೆಟ್ಟಿ, ಅಧೀಕ್ಷಕರು, ಉಪ ನಿರ್ದೇಶಕರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಕೋಲಾರ | ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ಮುಳಬಾಗಿಲು ತಾಲ್ಲೂಕು, ಕೋಲಾರ ಜಿಲ್ಲೆ (ಶ್ರೀ ಶಿವರಾಮು ಇವರು ನಿವೃತಿಹೊಂದಿರುವುದರಿಂದ ತೆರವಾದ ಹುದ್ದೆ) |
| 7 | 92 | ಶಾಲಿನಿ ವೀಣಾಕುಮಾರಿ, ಅಧೀಕ್ಷಕರು, ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು | ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ಮದ್ದೂರು ತಾಲ್ಲೂಕು, ಮಂಡ್ಯ ಜಿಲ್ಲೆ (ಶ್ರೀಮತಿ ಚಂದ್ರಕಲಾ ಇವರ ವರ್ಗಾವಣೆಯಿಂದ ತೆರವಾದ ಹುದ್ದೆ) |
| 8 | 94 | ಪಿ. ನರಹರಿರಾವ್, ಅಧೀಕ್ಷಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ಗುಡಿಬಂಡೆ, ಚಿಕ್ಕಬಳ್ಳಾಪುರ ಜಿಲ್ಲೆ | ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ ಗುಡಿಬಂಡೆ ಚಿಕ್ಕಬಳ್ಳಾಪುರ ಜಿಲ್ಲೆ (ಶ್ರೀ ಪಿ.ಎನ್. ಶಿವಕುಮಾರ್ ಇವರ ವರ್ಗಾವಣೆಯಿಂದ ತೆರವಾದ ಹುದ್ದೆ) |
| 9 | 96 | ಹೆಚ್.ಎಸ್. ಶಿವಸುಂದರ್, ಅಧೀಕ್ಷಕರು, ಆಯುಕ್ತರ ಕಛೇರಿ, ಸಾ.ಶಿ.ಇ., ಬೆಂಗಳೂರು | ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ಮಂಡ್ಯ ದಕ್ಷಿಣ, ಮಂಡ್ಯ (ಶ್ರೀ ಎನ್. ಗೋಪಾಲಕೃಷ್ಣ ಇವರ ವರ್ಗಾವಣೆಯಿಂದ ತೆರವಾಗುವ ಹುದ್ದೆ) |
| 10 | 149 | ಹೆಚ್. ಕಾಂತರಾಜು, ಅಧೀಕ್ಷಕರು, ಆಯುಕ್ತರ ಕಛೇರಿ, ಸಾ.ಶಿ.ಇ., ಬೆಂಗಳೂರು | ಪತ್ರಾಂಕಿತ ವ್ಯವಸ್ಥಾಪಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ಪಾಂಡವಪುರ, ಮಂಡ್ಯ ಜಿಲ್ಲೆ (ಶ್ರೀ ಹೆಚ್.ಆರ್. ನಾಗೇಶ್ ಇವರ ಇವರ ವರ್ಗಾವಣೆಯಿಂದ ತೆರವಾಗುವ ಹುದ್ದೆ) |

ಸ್ಥಾನಪನ್ನ ಬಡ್ತಿಯನ್ನು ಅಧೀಕ್ಷಕರುಗಳು ಈ ಆದೇಶ ಜಾರಿಯಾದ 15 ದಿನಗಳೊಳಗಾಗಿ ಪ್ರಸ್ತುತ ಕರ್ತವ್ಯ ನಿರ್ವಹಿಸುತ್ತಿರುವ ಕಛೇರಿಯಿಂದ ಬಿಡುಗಡೆಯಾಗಿ, ಬಡ್ತಿಯನ್ನು ನೀಡಿ ಸ್ಥಳ ನಿಯುಕ್ತಿಗೊಳಿಸಿರುವ ಸ್ಥಳದಲ್ಲಿ ಕರ್ತವ್ಯಕ್ಕೆ ಹಾಜರಾಗಲು ಈ ಮೂಲಕ ಆದೇಶಿಸಲಾಗಿದೆ.

4/7/15

(ಕೆ.ಎಸ್. ಸತ್ಯಮೂರ್ತಿ)

ಆಯುಕ್ತರು

ಇವರಿಗೆ:

1) ಸರ್ಕಾರದ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
2) ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು ಇವರಿಗೆ Ink Signed Copy.
3) ಜಿಲ್ಲಾಧಿಕಾರಿಗಳು, ಚಿಕ್ಕಬಳ್ಳಾಪುರ ಜಿಲ್ಲೆ, ಚಿಕ್ಕಬಳ್ಳಾಪುರ ಇವರಿಗೆ ಮುಂದಿನ ಕ್ರಮಕ್ಕಾಗಿ.
4) ಸಂಬಂಧಿಸಿದ ಜಿಲ್ಲಾ ಪಂಚಾಯತಿ ಕಾರ್ಯನಿರ್ವಹಣಾಧಿಕಾರಿಗಳಿಗೆ.
5) ಸಂಬಂಧಿಸಿದ ಕಛೇರಿ ಮುಖ್ಯಸ್ಥರಿಗೆ.
6) ಸಂಬಂಧಿಸಿದ ಅಧೀಕ್ಷಕರುಗಳಿಗೆ.
7) ಕಛೇರಿ ಪ್ರತಿ.



Scanned by CamScanner